All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

26.12.2025 6.40 p.m.

***************

ಮುಖ್ಯಾಂಶಗಳು

- ೨೦೩೦ರ ವೇಳೆಗೆ ಬೆಂಗಳೂರು ಸೇರಿದಂತೆ ೪೮ ಪ್ರಮುಖ ನಗರಗಳಲ್ಲಿ ರೈಲುಗಳ ಸಾಮರ್ಥ್ಯ ದ್ವಿಗುಣಕ್ಕೆ ಭಾರತೀಯ ರೈಲ್ವೆ ಚಿಂತನೆ
- ಮೈಸೂರಿನಲ್ಲಿ ಹೀಲಿಯಂ ಸಿಲಿಂಡರ್ ಸ್ಫೋಟ ಪ್ರಕರಣ; ಮೃತರ ಸಂಖ್ಯೆ ೨ಕ್ಕೆ ಏರಿಕೆ
- ಚಿತ್ರದುರ್ಗದ ಬಳಿ ಸಂಭವಿಸಿದ ಬಸ್ ಅಪಘಾತ; ತನಿಖೆಗೆ ಮುಖ್ಯಮಂತ್ರಿ ಸೂಚನೆ
- ಹೊಸ ವರ್ಷಾಚರಣೆಗೆ ಸಿದ್ಧತೆ: ಭಾನುವಾರ ಉನ್ನತ ಅಧಿಕಾರಿಗಳ ಸಭೆ - ಗೃಹ ಸಚಿವ ಡಾ.ಜಿ. ಪರಮೇಶ್ವರ್
- ಒಂದು ವರ್ಷದೊಳಗೆ ಎತ್ತಿನಹೊಳೆ ಯೋಜನೆ ಸಂಪೂರ್ಣ - ಸಚಿವ ಮುನಿಯಪ್ಪ

***************

ಹೆಚ್ಚುತ್ತಿರುವ ಪ್ರಯಾಣ ಬೇಡಿಕೆಯನ್ನು ಪೂರೈಸಲು ೨೦೩೦ರ ವೇಳೆಗೆ ಬೆಂಗಳೂರು ಸೇರಿದಂತೆ ೪೮ ಪ್ರಮುಖ ನಗರಗಳಲ್ಲಿ ರೈಲುಗಳ ಸಾಮರ್ಥ್ಯವನ್ನು ದ್ವಿಗುಣಗೊಳಿಸಲು ಭಾರತೀಯ ರೈಲ್ವೆ ಯೋಜಿಸಿದೆ.

ಬೆಂಗಳೂರು, ದೆಹಲಿ, ಮುಂಬೈ, ಕೋಲ್ಕತ್ತಾ, ಚೆನ್ನೈ, ಹೈದರಾಬಾದ್ ಮತ್ತಿತರ ನಗರಗಳು ಇದರಲ್ಲಿ ಸೇರಿವೆ. ಇದು ಹಂತ ಹಂತವಾಗಿ ಪ್ರಯಾಣ ಅಗತ್ಯವನ್ನು ಪೂರೈಸಲಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

ಈ ಸಂಬಂಧ ರೈಲ್ವೆ ಮಂಡಳಿಯ ಅಧ್ಯಕ್ಷ ಸತೀಶ್ ಕುಮಾರ್, ಎಲ್ಲಾ ವಲಯಗಳ ರೈಲ್ವೆ ಜನರಲ್ ಮ್ಯಾನೇಜನರ್‌ಗಳಿಗೆ ಪತ್ರ ಬರೆದಿದ್ದು, ತಮ್ಮ ವಿಭಾಗಗಳಲ್ಲಿ ರೈಲು ನಿರ್ವಹಣಾ ಸಾಮರ್ಥ್ಯವನ್ನು ಹೆಚ್ಚಿಸುವಂತೆ ಸೂಚಿಸಿದ್ದಾರೆ.

ನಗರ ಪ್ರದೇಶ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ಹೊಸ ಟರ್ಮಿನಲ್ ನ್ನು ಗುರುತಿಸಲು ಹಾಗೂ ಸ್ಥಾಪಿಸಲು ತಿಳಿಸಲಾಗಿದೆ. ಎರಡು ವಿಭಾಗಗಳ ವಿಭಿನ್ನ ಅವಶ್ಯಕತೆಗಳನ್ನು ಗಮನದಲ್ಲಿಟ್ಟುಕೊಂಡು ಉಪನಗರ ಮತ್ತು ಉಪನಗರ ವಲ್ಲದ ಸಂಚಾರಕ್ಕಾಗಿ ಈ ಯೋಜನೆಯನ್ನು ರೂಪಿಸಲಾಗಿದೆ.

***************

ಮೈಸೂರಿನ ಅರಮನೆ ಸಮೀಪ ನಿನ್ನೆ ಸಂಭವಿಸಿದ್ದ ಹೀಲಿಯಂ ಸಿಲಿಂಡರ್ ಸ್ಫೋಟದಲ್ಲಿ ಮೃತರ ಸಂಖ್ಯೆ ಎರಡಕ್ಕೆ ಏರಿಕೆಯಾಗಿದೆ.

ಈ ಘಟನೆಯಿಂದ ಗಂಭೀರವಾಗಿ ಗಾಯಗೊಂಡು ಕೆ.ಆರ್. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ನಂಜನಗೂಡು ಮೂಲದ ಮಹಿಳೆ ಮಂಜುಳಾ ಇಂದು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಮೃತ ಮಂಜುಳಾ ಮೂಲತಃ ನಂಜನಗೂಡು ನಿವಾಸಿಯಾಗಿದ್ದು, ಹೂವಿನ ವ್ಯಾಪಾರ ಮಾಡುತ್ತಿದ್ದರು ಎನ್ನಲಾಗಿದೆ. ಘಟನೆಯಲ್ಲಿ ಗಾಯಗೊಂಡಿದ್ದ ಇನ್ನೂ ಕೆಲವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರಿದಿದೆ.

***************

ಹೊಸ ವರ್ಷದ ಸಂಭ್ರಮಾಚರಣೆಗೆ ಭರದ ಸಿದ್ಧತೆಗಳು ನಡೆಯುತ್ತಿರುವಂತೆಯೇ ಭಾನುವಾರ ಪೊಲೀಸ್ ಅಧಿಕಾರಿಗಳ ಸಭೆ ಕರೆದಿರುವುದಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಭೆಯಲ್ಲಿ ಅಧಿಕಾರಿಗಳೊಂದಿಗೆ ಚರ್ಚಿಸಿ ಅಗತ್ಯ ಸೂಚನೆ ನೀಡಲಾಗುವುದು ಎಂದು ಹೇಳಿದರು.

ಇದೇ ವೇಳೆ, ಮೈಸೂರು ಅರಮನೆ ದ್ವಾರದ ಮುಂಭಾಗದಲ್ಲಿ ನಿನ್ನೆ ಸಂಭವಿಸಿದ ಹೀಲಿಯಂ ಸಿಲಿಂಡರ್ ಸ್ಫೋಟ ಪ್ರಕರಣ ಕುರಿತು ಪ್ರತಿಕ್ರಿಯಿಸಿದ ಸಚಿವರು, ಘಟನೆ ಸಂಬಂಧ ತನಿಖೆ ನಡೆಸಿ, ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

***************

ಹೊಸ ವರ್ಷದ ಸಂಭ್ರಮಾಚರಣೆಯ ಹಿನ್ನೆಲೆಯಲ್ಲಿ ಬೆಂಗಳೂರು ಕೇಂದ್ರ ನಗರ ಪಾಲಿಕೆಗೆ ಸೇರಿದ ಎಲ್ಲಾ ಉದ್ಯಾನವನಗಳು ಮತ್ತು ಕೆರೆಗಳಿಗೆ ಪ್ರವೇಶವನ್ನು ತಾತ್ಕಾಲಿಕವಾಗಿ ನಿರ್ಬಂಧಿಸಲು ಕ್ರಮ ವಹಿಸುವಂತೆ ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಅಭಿವೃದ್ಧಿ ಅಪರ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಈ ಮಧ್ಯೆ, ಚಿಕ್ಕಮಗಳೂರು ಜಿಲ್ಲೆಯಲ್ಲಿನ ಹೋಂ ಸ್ಟೇ, ರೆಸಾರ್ಟ್, ಹೊಟೇಲ್ ಸೇರಿದಂತೆ ಸಾರ್ವಜನಿಕ ಸ್ಥಳಗಳಿಗೆ ಹೊಸ ವರ್ಷಾಚರಣೆ ಸಂದರ್ಭದಲ್ಲಿ ಸಾರ್ವಜನಿಕರು ಸರ್ಕಾರದ ನಿಯಮಗಳನ್ನು ಅನುಸರಿಸುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಅಮಾಟೆ ಹೇಳಿದ್ದಾರೆ.

ಹೋಂಸ್ಟೇ, ರೆಸಾರ್ಟ್ ಮಾಲೀಕರು, ಪೊಲೀಸ್ ಹಾಗೂ ಅಗ್ನಿಶಾಮಕ ದಳ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ರಾತ್ರಿ ೧೦ ರಿಂದ ಬೆಳಗ್ಗೆ ೬ ಗಂಟೆವರೆಗೆ ಧ್ವನಿವರ್ಧಕ ಬಳಸುವಂತಿಲ್ಲ. ಪಟಾಕಿ ಸಿಡಿತ ಮತ್ತಿತರ ಚಟುವಟಿಕೆಗಳನ್ನು ನಿರ್ಬಂಧಿಸಲಾಗಿದೆ ಎಂದರು.

***************

ಚಿತ್ರದುರ್ಗದ ಹಿರಿಯೂರು ಬಳಿ ಖಾಸಗಿ ಬಸ್ ಮತ್ತು ಟ್ರಕ್ ನಡುವೆ ಸಂಭವಿಸಿದ ಅಪಘಾತದ ಬಗ್ಗೆ ತನಿಖೆಗೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಪಘಾತದಲ್ಲಿ ಟ್ರಕ್ ಚಾಲಕನ ತಪ್ಪಿರುವುದಾಗಿ ಮೇಲ್ನೋಟಕ್ಕೆ ಕಂಡು ಬಂದಿರುವುದಾಗಿ ಪೊಲೀಸರು ತಿಳಿಸಿದ್ದಾರೆ ಎಂದರು.

ಬಸ್ಸುಗಳು ಎಲ್ಲಾ ಸುರಕ್ಷತೆಯ ಕ್ರಮಗಳನ್ನು ಅನುಸರಿಸುವುದು ಅವಶ್ಯಕವಾಗಿದ್ದು, ಅಪಘಾತದ ಬಗ್ಗೆ ತನಿಖೆ ನಡೆಸಲಾಗುವುದು ಎಂದು ತಿಳಿಸಿದರು.

**** ಧ್ವನಿ ****ಮುಖ್ಯಮಂತ್ರಿ

***************

ಬಯಲುಸೀಮೆಯ ಜಿಲ್ಲೆಗಳಿಗೆ ನೀರುಣಿಸುವ ಎತ್ತಿನಹೊಳೆ ಯೋಜನೆ ಕಾಮಗಾರಿಯು ತ್ವರಿತಗತಿಯಲ್ಲಿ ಸಾಗುತ್ತಿದ್ದು ಒಂದು ವರ್ಷದೊಳಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ನೀರು ಹರಿಯುವ ವಿಶ್ವಾಸವಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ದೇವನಹಳ್ಳಿಯಲ್ಲಿಂದು ಮಾತನಾಡಿದ ಅವರು, ತುಮಕೂರಿನ ಕೊರಟಗೆರೆ ಹಾಗೂ ದೊಡ್ಡಬಳ್ಳಾಪುರದ ಸಾಸಲು ಹೋಬಳಿ ಹಾಗೂ ಕುಂದಾಣದ ಬಳಿ ನೀರು ಶೇಖರಣೆ ಆಗಲಿದೆ, ಅಲ್ಲಿಂದ ನೀರನ್ನು ಪಂಪ್ ಮಾಡಲಾಗುತ್ತದೆ ಎಂದರು.

ಜಿಲ್ಲೆಯ ಈ ಭಾಗಕ್ಕೆ ಕೆ.ಸಿ ವ್ಯಾಲಿ, ಎಚ್ಎನ್ ವ್ಯಾಲಿ, ಎತ್ತಿನಹೊಳೆ ನೀರು ಬರುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಲಿದೆ. ಕೃಷಿ ಚಟುವಟಿಕೆ ಕೈಗೊಳ್ಳಲು ಸಹಾಯಕವಾಗಲಿದೆ ಎಂದು ಸಚಿವರು ತಿಳಿಸಿದರು.

***************

ಗ್ರಾಮೀಣ ಪ್ರದೇಶಗಳಲ್ಲಿ ರೈತರು ತಮ್ಮ ಜಮೀನುಗಳಿಗೆ ತೆರಳಲು ಅನುಕೂಲವಾಗುವಂತೆ ರಸ್ತೆ ಕಾಮಗಾರಿಗೆ ಆದ್ಯತೆ ನೀಡಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್ ಮುನಿಯಪ್ಪ ಹೇಳಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ೧೦ ಕೋಟಿ ರೂಪಾಯಿ ವೆಚ್ಚದಲ್ಲಿ ವಿವಿಧ ರಸ್ತೆ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ

ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ ಎಂದರು.

***************

ಶಾಶ್ವತ ನೀರಾವರಿ ಯೋಜನೆಗಾಗಿ ಒತ್ತಾಯಿಸಿ ಜನವರಿ ೧೭ರಂದು ಕೋಲಾರದಲ್ಲಿ ಜಲಾಗ್ರಹ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಶಾಶ್ವತ ನೀರಾವರಿ ಹೋರಾಟ ವೇದಿಕೆ ಅಧ್ಯಕ್ಷ ಆರ್.ಆಂಜನೇಯ ರೆಡ್ಡಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಅವರು, ನೀರಿಗಾಗಿ ಒತ್ತಾಯಿಸಿ ನಡೆಯುತ್ತಿರುವ ಸಮಾವೇಶದಲ್ಲಿ ಜಿಲ್ಲೆಯ ಪ್ರತಿ ಮನೆಯಿಂದ ಒಬ್ಬರು ಪಾಲ್ಗೊಂಡು ಹಕ್ಕು ಪಡೆದುಕೊಳ್ಳಲು ಮುಂದಾಗಬೇಕು ಎಂದು ಕೋರಿದರು.

ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳು ೩೦ ವರ್ಷಗಳಿಂದ ನೀರಿನ ಸಾಮಾಜಿಕ ನ್ಯಾಯ ಪಡೆಯುವಲ್ಲಿ ವಿಫಲವಾಗಿವೆ. ನೀರಿನ ಹೆಸರಲ್ಲಿ ಸುಮಾರು ೩೦ ಸಾವಿರ ಕೋಟಿ ವೆಚ್ಚ ಮಾಡಿವೆ. ಆದರೆ ಯಾವುದೇ ಒಂದು ಯೋಜನೆ ಯಶಸ್ವಿಯಾಗಿ ಕಾರ್ಯಗತಗೊಂಡಿಲ್ಲ ಎಂದು ಆರೋಪಿಸಿದರು.

***************

ಧಾರವಾಡ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಕೃಷಿ ಇಲಾಖೆಯಿಂದ ಜಿಲ್ಲಾ ಮಟ್ಟದ ಸಿರಿಧಾನ್ಯ ಹಾಗೂ ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆ ಆಯೋಜಿಸಲಾಗಿತ್ತು.

ಈ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಕೃಷಿ ವಿಶ್ವವಿದ್ಯಾಲಯದ ಡೀನ್ ಡಾ. ಹೇಮಲತಾ, ಜನರ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಸಿರಿಧಾನ್ಯಗಳ ಬಳಕೆಯನ್ನು ಮತ್ತು ಸಿರಿಧಾನ್ಯ ಖಾದ್ಯಗಳ ತಯಾರಿಕೆಯನ್ನು ಹೆಚ್ಚಿನ ರೀತಿಯಲ್ಲಿ ಪ್ರೋತ್ಸಾಹಿಸಬೇಕಾಗಿದೆ ಎಂದರು.

ಸಿರಿಧಾನ್ಯಗಳು ಪೋಷಕಾಂಶಗಳಿಂದ ಸಮೃದ್ಧವಾಗಿದ್ದು, ಹೃದಯ ಆರೋಗ್ಯ, ಮಧುಮೇಹ ನಿಯಂತ್ರಣ ಮತ್ತು ತೂಕ ಸಮತೋಲನಕ್ಕೆ ಬಹಳ ಸಹಾಯಕವಾಗಿದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಹುಬ್ಬಳ್ಳಿ, ಧಾರವಾಡ ಮತ್ತು ಕಲಘಟಗಿ ತಾಲೂಕುಗಳಿಂದ ಭಾಗವಹಿಸಿದ್ದ ೨೦ ಸ್ಪರ್ಧಾರ್ಥಿಗಳು ಸಿರಿಧಾನ್ಯಗಳಿಂದ ತಯಾರಿಸಿದ ವಿವಿಧ ಬಗೆಯ ಖಾದ್ಯಗಳನ್ನು ಪ್ರದರ್ಶಿಸಿದರು.

***************

ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಇಂದು ಬ್ಯಾಟರಾಯನಪುರ ನಿಯಂತ್ರಣ ಕೊಠಡಿಯಲ್ಲಿ ನಾಗರಿಕರ ಅಹವಾಲುಗಳನ್ನು ಆಲಿಸುವ ಫೋನ್-ಇನ್ ಕಾರ್ಯಕ್ರಮ ನಡೆಸಿದರು.

ಈ ವೇಳೆ ಸಾರ್ವಜನಿಕರಿಂದ ಒಟ್ಟು ೨೭ ಕರೆಗಳನ್ನು ಸ್ವೀಕರಿಸಲ್ಪಟ್ಟಿದ್ದು, ೪೨ ಅಹವಾಲುಗಳು ದಾಖಲಾಗಿವೆ. ಪ್ರತಿ ಅಹವಾಲನ್ನು ಪರಿಶೀಲಿಸಿದ್ದು, ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇಂದಿನ ಕಾರ್ಯಕ್ರಮದಲ್ಲಿ ರಸ್ತೆ ನಿರ್ವಹಣೆಗಳ ಕುರಿತು ೨೦ ಅಹವಾಲುಗಳು, ಸಮರ್ಪಕ ತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಆರು ದೂರುಗಳು ಬಂದಿದ್ದು, ಪ್ರತಿಯೊಂದು ವಾರ್ಡ್‌ನಲ್ಲಿ ಸಕಾಲದಲ್ಲಿ ತ್ಯಾಜ್ಯ ವಿಲೇವಾರಿ ಮಾಡಬೇಕು ಹಾಗೂ ಕೆರೆಗಳಿಗೆ ಕೊಳಚೆ ನೀರು ಹರಿಯದಂತೆ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ನಗರ ಪಾಲಿಕೆಯ ನಾಗರಿಕರಿಂದ ಕುಂದುಕೊರತೆಗಳನ್ನು ನೇರವಾಗಿ ಆಲಿಸಿ, ತ್ವರಿತ ಪರಿಹಾರ ಒದಗಿಸಲು ಹಾಗೂ ಅಭಿವೃದ್ಧಿ ಕಾರ್ಯಗಳ ಪ್ರಗತಿಯನ್ನು ಅವಲೋಕಿಸಲು ಆಯುಕ್ತರು ಪ್ರತಿ ಶುಕ್ರವಾರ ಫೋನ್-ಇನ್- ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದ್ದಾರೆ.

***************

ಹಿರಿಯೂರು ಸಮೀಪ ಸಂಭವಿಸಿದ ಭೀಕರ ಬಸ್ ಮತ್ತು ಲಾರಿ ಅಪಘಾತದಲ್ಲಿ ಮೃತಪಟ್ಟ ಭಟ್ಕಳದ ಮಹಿಳೆಯೊಬ್ಬರ ನಿವಾಸಕ್ಕೆ ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಇಂದು ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

***************

ಮಡಿಕೇರಿ ಬಳಿಯ ಮೂರ್ನಾಡಿನಲ್ಲಿ ಇಂದಿನಿಂದ ಕೊಡವ ಕೌಟುಂಬಿಕ ಚಾಂಪಿಯನ್ಸ್ ಟ್ರೋಫಿ ಹಾಕಿ ಪಂದ್ಯಾವಳಿ ಆಯೋಜಿತವಾಗಿದೆ. ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯಲ್ಲಿ ಚಾಂಪಿಯನ್ ಮತ್ತು ರನ್ನರ್ಸ್ ತಂಡಗಳ ನಡುವೆ ಪಂದ್ಯಾವಳಿ ನಡೆಯಲಿದೆ.

ಕೊಡವ ಹಾಕಿ ಅಕಾಡೆಮಿ ವತಿಯಿಂದ ಈ ಪಂದ್ಯಾವಳಿ ಆಯೋಜಿತವಾಗಿದ್ದು, ಕೊಡವರ ೧೩ ತಂಡಗಳ ನಡುವಿನ ಪಂದ್ಯಾವಳಿಯು ಡಿಸೆಂಬರ್ ೩೦ ರವರೆಗೆ ನಡೆಯಲಿದೆ.

ವಿಜೇತ ಕುಟುಂಬ ತಂಡಕ್ಕೆ ೨ ಲಕ್ಷ ರುಪಾಯಿ, ದ್ವಿತೀಯ ಸ್ಥಾನ ಪಡೆದ ತಂಡಕ್ಕೆ ೧ ಲಕ್ಷ ರುಪಾಯಿ ಬಹುಮಾನ ನೀಡಲಾಗುತ್ತಿದೆ ಎಂದು ಕೊಡವ ಹಾಕಿ ಅಕಾಡೆಮಿಯ ಅಧ್ಯಕ್ಷ ಪಿ. ಬೋಪಣ್ಣ ಮಾಹಿತಿ ನೀಡಿದ್ದಾರೆ.

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಇದೇ ೨೮ ರಂದು ಕಾರವಾರ ತಾಲೂಕಿನ ನೇವಲ್ ಬೇಸ್‌ಗೆ ಪ್ರವಾಸ ಕೈಗೊಂಡಿದ್ದಾರೆ.

ಈ ಹಿನ್ನೆಲೆಯಲ್ಲಿ ಅವರು ಬಂದು, ಹೋಗುವವರೆಗೂ ಸುರಕ್ಷತೆಯ ಕಾರಣದಿಂದ ಅಂದು ಮಧ್ಯಾಹ್ನ ೩.೩೦ ಗಂಟೆಯವರೆಗೆ ಹಾರವಾಡದಿಂದ ಮಾಜಾಳಿಯ ವರೆಗಿನ ಸಮುದ್ರ ತೀರದಲ್ಲಿ ಮೀನುಗಾರಿಕೆಯನ್ನು ನಿಭಂಧಿಸಲಾಗಿದೆ.

ಎಲ್ಲಾ ಮೀನುಗಾರರು ಹಾಗೂ ದೋಣಿ ಮಾಲೀಕರು ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಉತ್ತರಕನ್ನಡ ಮೀನುಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*******ಮುಕ್ತಾಯ********